## 9. ರಾಜ್ಯ ಮುಕ್ತ ವಿವಿ ಈಗ ಹೈಟೆಕ್

ಹಲವು ಏಳುಬೀಳುಗಳ ಬಳಿಕ ತನ್ನ ಕಾರ್ಯ ವೈಖರಿಯನ್ನು ಬದಲಾಯಿಸಿಕೊಂಡಿರುವ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಈಗ ಸಂಪೂರ್ಣವಾಗಿ ಡಿಜಿಟಲೀಕರಣಗೊಂಡಿದ್ದು, ಎಲ್ಲವೂ ಆನ್‌ಲೈನ್‌ಗೆ ಒಳಪಟ್ಟಿರುವ ಏಕೈಕ ವಿವಿ ಎಂಬ ಹೆಗ್ಗಳಿಕೆ ಪಡೆದುಕೊಳ್ಳುತ್ತಿದೆ.

ಕೊರೋನಾ ಸಂಕಷ್ಟದ ದಿನಗಳಲ್ಲಿ ಆನ್‌ಲೈನ್ ಶಿಕ್ಷಣದ ಕುರಿತು ಚರ್ಚೆಗಳು ನಡೆಯುತ್ತಿರುವಂತೆ ಕರ್ನಾಟಕ ರಾಜ್ಯ ಮುಕ್ತ ವಿವಿ ಮತ್ತೊಂದು ಹೆಜ್ಜೆ ಮುಂದೆ ಹೋಗಿದೆ. ಕೊರೋನಾ ಲಾಕ್‌ಡೌನ್ ವೇಳೆ ಹೊಸತನಕ್ಕೆ ಹೊರಳಲು ಎಲ್ಲಾ ಸಿದ್ಧತೆ ಮಾಡಿಕೊಂಡಿತ್ತು. ಇದೀಗ ಪೂರ್ಣಗೊಳ್ಳುವ ಹಂತ ತಲುಪಿದ್ದು ಇನ್ನು ಮುಂದೆ ವಿದ್ಯಾರ್ಥಿಗಳು ಕುಳಿತಲ್ಲಿಯೇ ಎಲ್ಲಾ ರೀತಿಯ ಸೌಲಭ್ಯ ಪಡೆಯಬಹುದು. ವಿದ್ಯಾರ್ಥಿಗಳು ವಾರ್ಷಿಕ ಪರೀಕ್ಷೆಗೆ ಪರೀಕ್ಷಾ ಕೇಂದ್ರಗಳಿಗೆ ತೆರಳುವುದು ಬಿಟ್ಟರೆ ಎಲ್ಲಾ ಶೈಕ್ಷಣಿಕ ಚಟುವಟಿಕೆ ಆನ್‌ಲೈನ್‌ನಲ್ಲಿಯೇ ಮಾಡಬಹುದು.

ರಾಜ್ಯ ಮುಕ್ತ ವಿವಿಗಳಿಗೆ ಆಗಸ್ಟ್ 1 ರಿಂದ ನೂತನ ಸೌಲಭ್ಯ ಸಿಗಲಿದೆ. ಈ ಕುರಿತು ವಿಜಯ ಕರ್ನಾಟಕಕ್ಕೆ ಮಾಹಿತಿ ನೀಡಿದ ಕುಲಪತಿ ಪ್ರೊ. ಎಸ್.ವಿದ್ಯಾಶಂಕರ್, 'ಇಲ್ಲಿಯವರೆಗೆ ಪ್ರತಿಯೊಂದು ಕಾರ್ಯಕ್ಕೂ ವಿವಿ ಕಚೇರಿಗೆ ಇಲ್ಲವೇ ಅಧ್ಯಯನ ಕೇಂದ್ರಕ್ಕೆ ತೆರಳಬೇಕಿತ್ತು. ಮುಕ್ತ ವಿವಿಯಲ್ಲಿ ನೌಕರಿಯಲ್ಲಿರುವವರೇ ಹೆಚ್ಚಿನ ಸಂಖ್ಯೆ ವಿದ್ಯಾರ್ಥಿಗಳು. ಅವರಿಗೆ ಸಮಯ ಅಭಾವ ಇರುವುದರಿಂದ ತೊಂದರೆಯಾಗುತ್ತಿತ್ತು. ಈಗ ಪ್ರತಿ ಸೌಲಭ್ಯವನ್ನು ಆನ್‌ಲೈನ್‌ನಲ್ಲಿ ಪಡೆಯಬಹುದು" ಎಂದರು.

ಈ ಹಿಂದೆ ಮುಕ್ತ ವಿವಿಯಲ್ಲಿ ಪ್ರವೇಶಾತಿ ಪಡೆಯಲು ಕಚೇರಿಗೆ ತೆರಳಿ ಅರ್ಜಿ ಪಡೆದು ಇಲ್ಲವೇ ಆನ್‌ಲೈನ್‌ನಲ್ಲಿ ಅರ್ಜಿ ಡೌನ್‌ಲೋಡ್ ಮಾಡಿಕೊಂಡು ನೀಡಬೇಕಿತ್ತು. ಇದಕ್ಕೆ ಶುಲ್ಕ ಪಾವತಿಸಲು ಸಾಕಷ್ಟು ಹೊತ್ತು ಕ್ಯೂನಲ್ಲಿ ನಿಲ್ಲಬೇಕಿತ್ತು. ಬಳಿಕ ಸಂಬಂಧಿಸಿದ ಅಧ್ಯಯನ ವಿಭಾಗಕ್ಕೆ ಭೇಟಿ ನೀಡಿ ಅಲ್ಲಿಂದ ಸಿದ್ಧ ಪಾಠ ಪಡೆಯುವಷ್ಟರಲ್ಲಿ ಸಾಕು ಸಾಕಾಗುತ್ತಿತ್ತು. ಇನ್ನು ಮುಂದೆ ಈ ಸಮಸ್ಯೆಯಿಂದ ವಿದ್ಯಾರ್ಥಿಗಳು ಮುಕ್ತಿ ಪಡೆಯಲಿದ್ದಾರೆ. ಆನ್‌ಲೈನ್‌ನಲ್ಲಿಯೇ ಅರ್ಜಿ ತುಂಬಿಸಿ, ಡಿಜಿಟಲ್ ಪೇಮೆಂಟ್ ಮೂಲಕ ಶುಲ್ಕ ಪಾವತಿಸಬಹುದು. ಇದನ್ನು ಆನ್‌ಲೈನ್‌ನಲ್ಲಿಯೇ ಪರಿಶೀಲಿಸಿ ಅವರಿಗೆ ಪ್ರವೇಶಾತಿ ನೀಡಲಾಗುತ್ತಿದೆ.

**ಆ್ಯಪ್, ವೆಬ್‌ನಲ್ಲಿ ಲಭ್ಯ:** ಒಮ್ಮೆ ಪ್ರವೇಶ ಪಡೆದ ನಂತರ ವಿದ್ಯಾರ್ಥಿಗಳು ಆ್ಯಪ್, ಇಲ್ಲವೇ ಮುಕ್ತ ವಿವಿ ವೆಬ್‌ಸೈಟ್‌ನಲ್ಲಿ ತಮ್ಮ ರೋಲ್ ನಂಬರ್ ಮೂಲಕ ಲಾಗಿನ್ ಆಗಿ ಎಲ್ಲಾ ಸೌಲಭ್ಯ ಪಡೆಯಬಹುದು. ಸಿದ್ಧಪಾಠ, ಪ್ರಶ್ನೆಪತ್ರಿಕೆಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು. ಸಂಪರ್ಕ ತರಗತಿಗಳಿಗೆ ಬದಲಾಗಿ ಆನ್‌ಲೈನ್ ತರಗತಿಗಳು ನಡೆಯಲಿವೆ. ವಿಡಿಯೊ ಹಾಗೂ ಆಡಿಯೊ ಪಾಠಗಳನ್ನು ಕೂಡ ಆನ್‌ಲೈನ್‌ನಲ್ಲಿ ಅಳವಡಿಸಲಾಗಿದೆ. ಇವುಗಳನ್ನು ವಿದ್ಯಾರ್ಥಿಗಳು ಡೌನ್‌ಲೋಡ್ ಮಾಡಿಕೊಳ್ಳಬಹುದು. ಅಸೈನ್‌ಮೆಂಟ್‌ಗಳನ್ನು ಕೂಡ ಆನ್‌ಲೈನ್‌ನಲ್ಲಿಯೇ ಸಬ್‌ಮಿಟ್ ಮಾಡುವ ವ್ಯವಸ್ಥೆ ಆಗುತ್ತಿದೆ.

ಆಧಾರ:ವಿಜಯ ಕರ್ನಾಟಕ, ದಿನಾಂಕ:27.07.2020